ಭಾಗ್ಯಲಕ್ಷ್ಮೀ ಯೋಜನೆ

225 (889) ಶ್ರೀ ಗೋಪಾಲ ಭಂಡಾರಿ ಎಚ್. (ಕಾರ್ಕಳ) :– ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಉಡುಪಿ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 4 ವರ್ಷಗಳಿಂದ ಎಷ್ಟು ಜನರಿಗೆ ಭಾಗ್ಯಲಕ್ಷ್ಮೀ ಯೋಜನೆಯ ಸೌಲಭ್ಯ ಕಲ್ಪಿಸಲಾಗಿದೆ ;

ಆ) ಭಾಗ್ಯಲಕ್ಷ್ಮೀ ಯೋಜನೆಯ ಸೌಲಭ್ಯ ಪಡೆಯಲು ಇರುವ ಅರ್ಹತೆಗಳೇನು?

ಇ) ಭಾಗ್ಯಲಕ್ಷ್ಮೀ ಯೋಜನೆಯ ಸೌಲಭ್ಯ ಪಡೆಯಲು ಪಡಿತರ ಚೀಟಿ ಕಡ್ಡಾಯಗೊಳಿಸಲಾಗಿದೆಯೇ ;

ಈ) ಕಡ್ಡಾಯ ಅಲ್ಲದಿದ್ದಲ್ಲಿ ಬೇರೆ ಯಾವ ದಾಖಲೆ ಅಗತ್ಯವಿದೆ ? (ವಿವರ ಒದಗಿಸುವುದು)

ಶ್ರೀ ಕಳಕಪ್ಪ ಜೆ. ಬಂಡಿ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು):–

ಅ) ಉಡುಪಿ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 4 ವರ್ಷಗಳಿಂದ 9543 ಫಲಾನುಭವಿಗಳಿಗೆ ಭಾಗ್ಯಲಕ್ಷ್ಮೀ ಯೋಜನೆಯಡಿ ಸೌಲಭ್ಯ ಒದಗಿಸಲಾಗಿದೆ. ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

1. ಉಡುಪಿ	3787
2. ಕುಂದಾಪುರ	3828
3. ಕಾರ್ಕಳ	1928
ಒಟ್ಟು	9543

ಆ) ಭಾಗ್ಯಲಕ್ಷ್ಮೀ ಯೋಜನೆಯ ಸೌಲಭ್ಯ ಪಡೆಯಲು ನಿಗದಿಪಡಿಸಿರುವ ಅರ್ಹತೆಗಳು ಈ ಕೆಳಗಿನಂತಿವೆ.

ಹೆಣ್ಣು ಮಗು ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಲ್ಲಿ ಜನಿಸಿರಬೇಕು.

1. ಕುಟುಂಬದ ಸದಸ್ಯರ ಹೆಸರು ಅಥವಾ ಕುಟುಂಬದ ಮುಖ್ಯಸ್ಥರ ಭಾವಚಿತ್ರ ಇರುವ ಬಿಪಿಎಲ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರಬೇಕು.

2. ಮಗುವಿನ ಜನನ ನೋಂದಣಿ ಪ್ರಮಾಣ ಪತ್ರವನ್ನು ಹೊಂದಿರಬೇಕು.

3. ಆರೋಗ್ಯ ಇಲಾಖೆಯ ಕಾರ್ಯಕ್ರಮದಂತೆ ರೋಗ ನಿರೋಧಕ ಚುಚ್ಚುಮದ್ದನ್ನು ಹಾಕಿಸಿರಬೇಕು.

4. ಕುಟುಂಬದ ಎರಡು ಹೆಣ್ಣು ಮಕ್ಕಳು ಮಾತ್ರ ಈ ಸೌಲಭ್ಯವನ್ನು ಪಡೆಯಲು ಸೀಮಿತ ಗೊಳಿಸಲಾಗಿದೆ.

5. ಈ ಕುಟುಂಬವು ಮಗುವಿನ ತಾಯಿ ಅಥವಾ ತಂದೆ ಯಾರಾದರೊಬ್ಬರು ಶಾಶ್ವತ ಕುಟುಂಬ ಯೋಜನೆಯ ಪದ್ಧತಿಯನ್ನು ಅಳವಡಿಸಿಕೊಂಡಿದ್ದು, ಒಟ್ಟು ಮೂರು ಮಕ್ಕಳನ್ನು ಮೀರಿರಕೂಡದು.

ಈ) ಹೌದು, ದಿನಾಂಕ : 01–04–2011 ರಿಂದ ಜನಿಸಿದ ಮಕ್ಕಳಿಗೆ ಬಿಪಿಎಲ್ ಪಡಿತರ ಚೀಟಿ ಕಡ್ಡಾಯಗೊಳಿಸಲಾಗಿದೆ.

ಪಶುಸಂಗೋಪನಾ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ

234 (892) ಶ್ರೀ ಖಾದರ್ ಯು.ಟಿ. (ಮಂಗಳೂರು) :– ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಪಶು ಚಿಕಿತ್ಸಾಲಯ ಮತ್ತು ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಕ್ಷೇತ್ರವಾರು ವಿವರ ಒದಗಿಸುವುದು)

ಆ) ದಕ್ಷಿಣ ಕನ್ನಡ ಜಿಲ್ಲೆಯ ಪಶು ಸಂಗೋಪನಾ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ಈ ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

ಶ್ರೀ ರೇವೂನಾಯಕ್ ಬೆಳಮಗಿ (ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು):–